9 ಅಲ್ಪಸಂಖ್ಯಾತರ ಐಟಿಐ/ಡಿಪ್ಲೋಮಾ ವಿದ್ಯಾರ್ಥಿಗಳಿಗೆ ಶಿಷ್ಯವೇತನ

10 ಅಲ್ಪಸಂಖ್ಯಾತರ ಸಂಸ್ಥೆಗಳಿಂದ ನಡೆಸಲ್ಪಡುತ್ತಿರುವ ವಿದ್ಯಾರ್ಥಿ ನಿಲಯಗಳು

11 ಮೊರಾರ್ಜಿ ದೇಸಾಯಿ ವಸತಿ ಶಾಲೆಗಳು

12 ಅಲ್ಪಸಂಖ್ಯಾತರಿಗಾಗಿ ವೃತ್ತಿ ತರಬೇತಿ

ಅಲ್ಪಸಂಖ್ಯಾತರಿಗಾಗಿ ಅನಾಥಾಲಯಗಳು

640 (709) ಶ್ರೀ ಸಿಂಧೂರ ಜಿ. ರಾಜಶೇಖರ (ಶಿಗ್ಗಾಂವ್) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಬ್ಬಳ್ಳಿ ಕಿಮ್ಸ್ ಆಸ್ಪತ್ರೆಯಲ್ಲಿ ಈಗಾಗಲೇ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ವಸತಿ ಗೃಹಗಳ ತೊಂದರೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಹುಬ್ಬಳ್ಳಿ ಕಿಮ್ಸ್ ಆಸ್ಪತ್ರೆಯಲ್ಲಿ ಈ ಹಿಂದೆ ಕರ್ತವ್ಯ ನಿರ್ವಹಿಸುತ್ತಿದ್ದ ಆಗಿನ ನಿರ್ದೇಶಕರು ಹಾಗೂ ಆಗಿನ ಇನ್‌ಚಾರ್ಜ್ ಎಸ್ಟೇಟ್ ಆಫೀಸರ್‌ರವರು ಇವರಿಬ್ಬರಿಗೂ ಸುಮಾರು 6 ತಿಂಗಳುಗಳ ಹಿಂದೆ ವರ್ಗಾವಣೆಯಾಗಿ, ವರ್ಗಾವಣೆಯಾದ ಸ್ಥಳಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ ಅವರು ಕಿಮ್ಸ್ ಆಸ್ಪತ್ರೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾಗ ತೆಗೆದುಕೊಂಡಿದ್ದ ವಸತಿ ಗೃಹ ಖಾಲಿ ಮಾಡದೇ ಅನಧಿಕೃತವಾಗಿ ತಮ್ಮ ಅಧೀನದಲ್ಲಿ ಇಟ್ಟುಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಹಾಗಿದ್ದಲ್ಲಿ, ಕಿಮ್ಸ್ ಆಸ್ಪತ್ರೆಯ ವಸತಿ ಗೃಹಗಳನ್ನು ಅನಧಿಕೃತವಾಗಿ ತಮ್ಮ ಅಧೀನದಲ್ಲಿ ಇಟ್ಟುಕೊಂಡಿರುವುದನ್ನು ತೆರವುಗೊಳಿಸಿ ಇವರ ಮೇಲೆ ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ಎ.ಎಸ್. ಆಚಾರ್ಯ (ವೈದ್ಯಕೀಯ ಶಿಕ್ಷಣ ಸಚಿವರು)

ಅ) – ಹೌದು –

ಆ) ಕಿಮ್ಸ್‌ನ ಹಿಂದಿನ ನಿರ್ದೇಶಕರು ಮತ್ತು ಎಸ್ಟೇಟ್ ಆಫೀಸರ್ ರವರು ಕ್ರಮವಾಗಿ ದಿನಾಂಕ 23–11–2007 ಮತ್ತು 30–09–2006 ರಂದು ವಸತಿ ಗೃಹವನ್ನು ಖಾಲಿ ಮಾಡಿ ಸ್ವಾಧೀನವನ್ನು ಈಗಾಗಲೇ ಸಂಸ್ಥೆಗೆ ವಹಿಸಿರುತ್ತಾರೆ

ಇ) – ಉದ್ಭವಿಸುವುದಿಲ್ಲ –